# ಕರ್ನಾಟಕ ವಿಧಾನ ಪರಿಷತ್ತು

**ನೂರ ಇಪ್ಪತ್ತೆರಡನೇ ಅಧಿವೇಶನ**
**( ಮುಂದುವರೆದ ಉಪವೇಶನ )**

**ಲಘು ಪ್ರಕಟಣೆ ಭಾಗ – 2**

**(ಸಾಂಸದಿಕ ಹಾಗೂ ಇತರೆ ವಿಷಯಗಳಿಗೆ ಸಂಬಂಧಿಸಿದ ಸಾಮಾನ್ಯ ಮಾಹಿತಿ)**

**ಶನಿವಾರ, ದಿನಾಂಕ: 29ನೇ ಜೂನ್, 2013**

**ಕ್ರಮ ಸಂಖ್ಯೆ : 33**

## ವಿಧಾನ ಪರಿಷತ್ತಿನ ಉಪವೇಶನಗಳು

ಕರ್ನಾಟಕ ವಿಧಾನ ಪರಿಷತ್ತಿನ ನೂರ ಇಪ್ಪತ್ತೆರಡನೇ ಅಧಿವೇಶನದ (ಮುಂದುವರೆದ ಉಪವೇಶನ) ಉಪವೇಶನಗಳು ದಿನಾಂಕ: 12.07.2013 ರಿಂದ ಪ್ರಾರಂಭವಾಗಲಿದ್ದು, ದಿನಾಂಕ: 31.07.2013 ರವರೆಗೆ ಕಾರ್ಯಕಲಾಪಗಳನ್ನು ನಡೆಸಲು ನಿಗದಿಗೊಳಿಸಲಾಗಿದೆ.

ಮಾನ್ಯ ಸಭಾಪತಿಯವರು ವಿಧಾನ ಪರಿಷತ್ತಿನ ಉಪವೇಶನದ ವೇಳೆಯನ್ನು ಅನ್ಯಥಾ ಅಧಿಸೂಚಿಸದ ಹೊರತು ಸದನದ ಉಪವೇಶನವು ಬೆಳಿಗ್ಗೆ 11-00 ಗಂಟೆಯಿಂದ 2-00 ಗಂಟೆಯವರೆಗೆ ಮತ್ತು ಮಧ್ಯಾಹ್ನ 3.00 ಗಂಟೆಯಿಂದ ಸಂಜೆ 6.00 ಗಂಟೆಯವರೆಗೆ ಸಮಾವೇಶಗೊಳ್ಳುತ್ತದೆ.

ಸದನದ ಉಪವೇಶನವನ್ನು ಅನಿರ್ದಿಷ್ಟ ಕಾಲದವರೆಗೆ ಅಥವಾ ಒಂದು ದಿನದ ಮಟ್ಟಿಗೆ ಅಥವಾ ಸದನದ ಉಪವೇಶನದ ಕಾಲದಲ್ಲಿನ ಒಂದು ಗಂಟೆಯವರೆಗೆ ಅಥವಾ ಅದೇ ದಿನದ ಒಂದು ಭಾಗದವರೆಗೆ ಮುಂದೂಡುವುದನ್ನು ಮಾನ್ಯ ಸಭಾಪತಿಯವರು ನಿರ್ಧರಿಸುವರು.

ಮಾನ್ಯ ಸಭಾಪತಿಯವರು ತಮಗೆ ಸೂಕ್ತವೆಂದು ಕಂಡುಬಂದ ಪಕ್ಷದಲ್ಲಿ ಸದನದ ಉಪವೇಶನವು ಯಾವ ದಿನಾಂಕ ಅಥವಾ ಕಾಲಕ್ಕಿಂತ ಮುಂಚಿತವಾಗಿ ಅಥವಾ ಸಭೆಯನ್ನು ಅನಿರ್ದಿಷ್ಟ ಕಾಲದವರೆಗೆ ಮುಂದಕ್ಕೆ ಹಾಕಿದ ತರುವಾಯ ಯಾವ ಕಾಲದಲ್ಲಾಗಲಿ ಸದನದ ಉಪವೇಶನವನ್ನು ನಡೆಸಬಹುದು.

ವಿಧಾನ ಪರಿಷತ್ತಿನ ನೂರ ಇಪ್ಪತ್ತೆರಡನೇ ಅಧಿವೇಶನದ (ಮುಂದುವರೆದ ಉಪವೇಶನ) ಉಪವೇಶನಗಳ ಕಾರ್ಯಕಲಾಪಗಳನ್ನು ವ್ಯವಹರಿಸಲು ಈ ಕೆಳಕಂಡಂತೆ ದಿನಾಂಕಗಳನ್ನು ತಾತ್ಕಾಲಿಕವಾಗಿ ನಿಗದಿಪಡಿಸಲಾಗಿದೆ.

**ದಿನಾಂಕ : 12, 15, 16, 17, 18, 19, 22, 23, 24, 25, 26, 29, 30 ಹಾಗೂ 31ನೇ ಜುಲೈ 2013.**

ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮಗಳ ಮೇರೆಗೆ ನೀಡಬೇಕಾದ ಎಲ್ಲಾ ಸೂಚನಾ ಪತ್ರಗಳನ್ನು ಸಭಾಪತಿಯವರಿಗೆ ಹೆಸರಿಸದೆ, ವಿಧಾನ ಪರಿಷತ್ತಿನ ಕಾರ್ಯದರ್ಶಿಯವರಿಗೆ ಹೆಸರಿಸಿ ಸದಸ್ಯರು ಸಹಿ ಮಾಡಿದ ಲಿಖಿತ ಸೂಚನಾ ಪತ್ರವನ್ನು ನೀಡಬೇಕು.

ಭಾನುವಾರ ಹಾಗೂ ಸಾರ್ವಜನಿಕ ರಜಾ ದಿನಗಳನ್ನು ಹೊರತುಪಡಿಸಿ, ವಿಧಾನಸೌಧದ ಮೊದಲನೇ ಮಹಡಿಯಲ್ಲಿರುವ ವಿಧಾನ ಪರಿಷತ್ತಿನ ಪ್ರಶ್ನೆಗಳ ಶಾಖೆಯಲ್ಲಿ (ಕೊಠಡಿ ಸಂಖ್ಯೆ: **103**) ಸೂಚನಾ ಪತ್ರವನ್ನು ಬೆಳಗ್ಗೆ **10-00** ಗಂಟೆಯಿಂದ ಮಧ್ಯಾಹ್ನ **3-00** ಗಂಟೆಯವರೆಗೆ ಸ್ವೀಕರಿಸಲಾಗುವುದು. ಬೆಳಗ್ಗೆ **10-00** ಗಂಟೆಗೆ ಮೊದಲು ಹಾಗೂ ಮಧ್ಯಾಹ್ನ **3-00** ಗಂಟೆಯ ನಂತರ ಸೂಚನಾ ಪತ್ರಗಳನ್ನು ನೀಡಬಯಸುವ ಸದಸ್ಯರು ಅವುಗಳನ್ನು ಪ್ರಶ್ನೆಗಳ ಶಾಖೆಯ (ಕೊಠಡಿ ಸಂಖ್ಯೆ: **103**) ಹೊರಗಡೆ ಇಟ್ಟಿರುವ ಮರದ ಪೆಟ್ಟಿಗೆಯಲ್ಲಿ ಹಾಕತಕ್ಕದ್ದು. ವಿಧಾನ ಪರಿಷತ್ತಿನ ಸಚಿವಾಲಯದ ಸಿಬ್ಬಂದಿಯವರು ಪ್ರತಿದಿನ ಬೆಳಗ್ಗೆ **10-00** ಗಂಟೆಗೆ ಪೆಟ್ಟಿಗೆಯನ್ನು ತೆರೆಯುವರು ಹಾಗೂ ನಿಯಮಗಳನುಸಾರವಾಗಿ ಸೂಚನಾ ಪತ್ರಗಳನ್ನು ಪರಿಶೀಲಿಸಿ ಕ್ರಮ ಕೈಗೊಳ್ಳುವರು. ಬೆಳಗ್ಗೆ **10-00** ಗಂಟೆಗೆ ಮುನ್ನ ಸ್ವೀಕರಿಸಲಾಗುವ ಸೂಚನಾ ಪತ್ರಗಳನ್ನು ಆ ದಿನಕ್ಕೆ ಸಂಬಂಧಿಸಿದ್ದೆಂದು ಪರಿಗಣಿಸಲಾಗುವುದು.

## ಪ್ರಶ್ನೆಗಳು (ಚುಕ್ಕೆ ಗುರುತಿನ ಮತ್ತು ಚುಕ್ಕೆ ಗುರುತಿಲ್ಲದ ಪ್ರಶ್ನೆಗಳು)
## ನಿಯಮ 35 ರಿಂದ 41

ಸೂಚನಾ ಪತ್ರಗಳಿಗೆ ಬೇಕಾಗುವ ಕಾಲಾವಧಿ ಹಾಗೂ ಅದರ ಕಾರ್ಯವಿಧಾನ ನಿಯಮಗಳನುಸಾರವಾಗಿ ಈ ಕೆಳಕಂಡಂತಿದೆ:

ಪ್ರಶ್ನೆಗಳಿಗೆ ಸಂಬಂಧಿಸಿದ ಸೂಚನಾ ಪತ್ರಗಳನ್ನು ಹತ್ತು ಪೂರ್ಣ ದಿನಗಳಿಗೆ ಕಡಿಮೆಯಿಲ್ಲದಂತೆ ನೀಡಬೇಕು. ಈ ಅವಧಿಯನ್ನು ಪರಿಗಣಿಸಿದಲ್ಲಿ ಸೂಚನಾ ಪತ್ರಗಳನ್ನು ಪಡೆದ ಹಾಗೂ ಉತ್ತರಗಳನ್ನು ಇಚ್ಛಿಸಿದ ದಿನಗಳೆರಡನ್ನು ಹೊರತುಪಡಿಸಲಾಗಿದೆ.

ಸಚಿವರುಗಳನ್ನು ಹಾಗೂ ಸರ್ಕಾರದ ಇಲಾಖೆಗಳನ್ನು **I, II, III, IV** ಮತ್ತು **V** ಎಂಬ ಐದು ಸಮೂಹಗಳಾಗಿ ವಿಭಾಗಿಸಲಾಗಿದೆ ಹಾಗೂ ಸಚಿವರುಗಳ ಪ್ರತಿಯೊಂದು ಸಮೂಹದ ಪ್ರಶ್ನೆಗಳಿಗೆ ಉತ್ತರಿಸಲು ಅನುಕ್ರಮವಾಗಿ ಸೋಮವಾರ, ಮಂಗಳವಾರ, ಬುಧವಾರ, ಗುರುವಾರ ಹಾಗೂ ಶುಕ್ರವಾರಗಳನ್ನು ನಿಗದಿಪಡಿಸಲಾಗಿದೆ.

ಪ್ರತಿದಿನ ಬಾಯಿ ಮಾತಿನ ಮೂಲಕ ಉತ್ತರಿಸುವ ಪ್ರಶ್ನೆಗಳ ಪಟ್ಟಿಯಲ್ಲಿನ ಒಟ್ಟು ಪ್ರಶ್ನೆಗಳ ಸಂಖ್ಯೆ ಹದಿನೈದು (**15**) ಮೀರುವುದಿಲ್ಲ (ನಿಯಮ **39**) ಹಾಗೂ ಚುಕ್ಕೆ ಗುರುತಿಲ್ಲದ ಪ್ರಶ್ನೆಗಳ ಪಟ್ಟಿಯಲ್ಲಿ ಇನ್ನೂರ ಮೂವತ್ತು ಪ್ರಶ್ನೆಗಳನ್ನು ಮೀರುವುದಿಲ್ಲ **[(**ನಿಯಮ **41 (2)]**.

ಯಾರೇ ಒಬ್ಬ ಸದಸ್ಯರು ಕೇಳಬಹುದಾದ ಪ್ರಶ್ನೆಗೆ ಸಂಬಂಧಪಟ್ಟಂತೆ, ಯಾವುದೇ ಒಂದು ದಿನಕ್ಕಾಗಿ ಹೆಚ್ಚಿನ ಸಂಖ್ಯೆಯಲ್ಲಿ ಚುಕ್ಕೆ ಗುರುತಿನ ಪ್ರಶ್ನೆಗಳು ಇಲ್ಲದಿದ್ದಲ್ಲಿ, ಆ ದಿನಕ್ಕೆ ಚುಕ್ಕೆ ಗುರುತಿನ ಎರಡು ಪ್ರಶ್ನೆಗಳಿಗಿಂತ ಹೆಚ್ಚಿಲ್ಲದಂತೆ ಒಟ್ಟು ಹದಿನೈದು ಪ್ರಶ್ನೆಗಳನ್ನು ಮೀರದಂತೆ ಚುಕ್ಕೆ ಗುರುತಿನ ಪ್ರಶ್ನೆಗಳ ಪಟ್ಟಿಯಲ್ಲಿ ಸೇರಿಸಲಾಗುವುದು.

ಎರಡಕ್ಕಿಂತ ಹೆಚ್ಚಿನ ಪ್ರಶ್ನೆಗಳನ್ನು ಲಿಖಿತ ಮೂಲಕ ಉತ್ತರಿಸಲಾಗುವ ಪ್ರಶ್ನೆಗಳ ಪಟ್ಟಿಯಲ್ಲಿ ಸೇರಿಸಲಾಗುವುದು.

# ವಿವರಣಾ ಪಟ್ಟಿ – 1

ವಿಧಾನ ಪರಿಷತ್ತಿನ ನೂರ ಇಪ್ಪತ್ತೆರಡನೇ ಅಧಿವೇಶನದ (ಮುಂದುವರೆದ ಉಪವೇಶನ) ಉಪವೇಶನಗಳ ಪ್ರಶ್ನೆಗಳಿಗೆ ಸೂಚನಾ ಪತ್ರಗಳನ್ನು ಸ್ವೀಕರಿಸಲು ಹಾಗೂ ಪ್ರಶ್ನೆಗಳ ಸೂಚನಾ ಪತ್ರಗಳ ಬ್ಯಾಲೆಟ್ ನಡೆಸುವ ದಿನಾಂಕಗಳ ಪಟ್ಟಿ :-

| ಕ್ರಮ ಸಂಖ್ಯೆ | ಉಪವೇಶನದ ದಿನಾಂಕ | ಸಮೂಹ | ಪ್ರಶ್ನೆಗಳಿಗೆ ಸೂಚನಾ ಪತ್ರಗಳನ್ನು ಸ್ವೀಕರಿಸಲು ಕೊನೆಯ ದಿನಾಂಕ | ಪ್ರಶ್ನೆಗಳ ಸೂಚನಾ ಪತ್ರಗಳ ಬ್ಯಾಲೆಟ್ ನಡೆಸುವ ದಿನಾಂಕ |
|---|---|---|---|---|
| 1. | 12-07-2013 ಶುಕ್ರವಾರ | V | 02-07-2013 | 03-07-2013 |
| 2. | 15-07-2013 ಸೋಮವಾರ | I | 04-07-2013 | 05-07-2013 |
| 3. | 16-07-2013 ಮಂಗಳವಾರ | II | 05-07-2013 | 06-07-2013 |
| 4. | 17-07-2013 ಬುಧವಾರ | III | 06-07-2013 | 08-07-2013 |
| 5. | 18-07-2013 ಗುರುವಾರ | IV | 08-07-2013 | 09-07-2013 |
| 6. | 19-07-2013 ಶುಕ್ರವಾರ | V | 08-07-2013 | 10-07-2013 |
| 7. | 22-07-2013 ಸೋಮವಾರ | I | 11-07-2013 | 12-07-2013 |
| 8. | 23-07-2013 ಮಂಗಳವಾರ | II | 12-07-2013 | 13-07-2013 |
| 9. | 24-07-2013 ಬುಧವಾರ | III | 13-07-2013 | 15-07-2013 |
| 10. | 25-07-2013 ಗುರುವಾರ | IV | 15-07-2013 | 16-07-2013 |
| 11. | 26-07-2013 ಶುಕ್ರವಾರ | V | 15-07-2013 | 17-07-2013 |
| 12. | 29-07-2013 ಸೋಮವಾರ | I | 18-07-2013 | 19-07-2013 |
| 13. | 30-07-2013 ಮಂಗಳವಾರ | II | 19-07-2013 | 20-07-2013 |
| 14. | 31-07-2013 ಬುಧವಾರ | III | 20-07-2013 | 22-07-2013 |

# ವಿವರಣಾ ಪಟ್ಟಿ – 2

ದಿನಾಂಕ: 12.07.2013 ರಿಂದ ಪ್ರಾರಂಭವಾಗಲಿರುವ ನೂರ ಇಪ್ಪತ್ತೆರಡನೇ ಅಧಿವೇಶನದ (ಮುಂದುವರೆದ ಉಪವೇಶನ) ಉಪವೇಶನಗಳಲ್ಲಿ ಪ್ರತಿಯೊಂದು ಸಮೂಹದಲ್ಲಿ ಇರುವ ಮಂತ್ರಿಗಳು ಮತ್ತು ಇಲಾಖೆಗಳು ಹಾಗೂ ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಿಸಬೇಕಾದ ದಿನಾಂಕಗಳನ್ನು ಈ ಕೆಳಗೆ ನಮೂದಿಸಲಾಗಿದೆ:

| ಸಮೂಹ | ಇಲಾಖೆಗಳು | ಸಂಬಂಧಪಟ್ಟ ಮಂತ್ರಿಗಳು | ಪ್ರಶ್ನೆಗಳಿಗೆ ಉತ್ತರ ನೀಡುವ ದಿನಾಂಕ |
|---|---|---|---|
| 1 | 2 | 3 | 4 |
| V<br>ಶುಕ್ರವಾರ | 1. ಶಿಕ್ಷಣ ಇಲಾಖೆಯಿಂದ **ಉನ್ನತ ಶಿಕ್ಷಣ**<br>2. **ಪ್ರವಾಸೋದ್ಯಮ ಇಲಾಖೆ** | **ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು** | **12, 19 ಮತ್ತು 26ನೇ ಜುಲೈ, 2013.** |
| | **ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ** | **ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು** | –"– |
| | **ವಸತಿ ಇಲಾಖೆ** | **ವಸತಿ ಸಚಿವರು** | –"– |
| | ಆರ್ಥಿಕ ಇಲಾಖೆಯಿಂದ **ಅಬಕಾರಿ** | **ಅಬಕಾರಿ ಸಚಿವರು** | –"– |
| | 1. **ಮೂಲಭೂತ ಸೌಲಭ್ಯ ಅಭಿವೃದ್ಧಿ ಇಲಾಖೆ**<br>2. ಕನ್ನಡ ಮತ್ತು ಸಂಸ್ಕೃತಿ ಹಾಗೂ ವಾರ್ತಾ ಇಲಾಖೆಯಿಂದ **ವಾರ್ತಾ** | **ಮೂಲಭೂತ ಸೌಲಭ್ಯ ಅಭಿವೃದ್ಧಿ ಮತ್ತು ವಾರ್ತಾ ಸಚಿವರು** | –"– |
| | ಶಿಕ್ಷಣ ಇಲಾಖೆಯಿಂದ ಉನ್ನತ ಶಿಕ್ಷಣ ಹೊರತುಪಡಿಸಿ **ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ** | **ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು** | –"– |
| | 1. **ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ**<br>2. ಕನ್ನಡ ಮತ್ತು ಸಂಸ್ಕೃತಿ ಹಾಗೂ ವಾರ್ತಾ ಇಲಾಖೆಯಿಂದ **ಕನ್ನಡ ಮತ್ತು ಸಂಸ್ಕೃತಿ** | **ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು** | –"– |

| | | | |
|---|---|---|---|
| I<br>ಸೋಮವಾರ | 1. ಯೋಜನೆ ಮತ್ತು ಸಾಂಖ್ಯಿಕ ಇಲಾಖೆ<br>2.ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ | ಯೋಜನೆ ಮತ್ತು ಸಾಂಖ್ಯಿಕ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು | 15, 22 ಮತ್ತು 29ನೇ ಜುಲೈ, 2013. |
| | ಸಾರಿಗೆ ಇಲಾಖೆ | ಸಾರಿಗೆ ಸಚಿವರು | –"– |
| | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ವೈದ್ಯಕೀಯ ಶಿಕ್ಷಣ ಹೊರತುಪಡಿಸಿ **ಆರೋಗ್ಯ ಮತ್ತು ಕುಟುಂಬ ಕಲ್ಯಾಣ** | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು | –"– |
| | 1. ಸಮಾಜ ಕಲ್ಯಾಣ ಇಲಾಖೆ<br>2.ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ | ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು | –"– |
| | ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ | ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು | –"– |
| | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ **ವೈದ್ಯಕೀಯ ಶಿಕ್ಷಣ** | ವೈದ್ಯಕೀಯ ಶಿಕ್ಷಣ ಸಚಿವರು | –"– |
| II<br>ಮಂಗಳವಾರ | 1. ನಗರಾಭಿವೃದ್ಧಿ ಇಲಾಖೆಯಿಂದ **ಪುರಸಭೆ ಮತ್ತು ಸ್ಥಳೀಯ ಸಂಸ್ಥೆಗಳು** (ಸಿ.ಎಂ.ಸಿ, ಟಿ.ಎಂ.ಸಿ. ಮತ್ತು ಟಿ.ಪಿ.ಎಸ್. ಗಳು)<br>2. ಸಾರ್ವಜನಿಕ ಉದ್ದಿಮೆಗಳ ಇಲಾಖೆ.<br>3. ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ಹಜ್, ವಕ್ಫ್ ಇಲಾಖೆ. | ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಸಚಿವರು | 16, 23 ಮತ್ತು 30ನೇ ಜುಲೈ, 2013 |
| | 1. ಸಹಕಾರ ಇಲಾಖೆಯಿಂದ **ಕೃಷಿ ಮಾರುಕಟ್ಟೆ**<br>2. ತೋಟಗಾರಿಕೆ ಇಲಾಖೆಯಿಂದ ರೇಷ್ಮೆ ಹೊರತುಪಡಿಸಿ **ತೋಟಗಾರಿಕೆ** | ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು | –"– |

| | | | |
|---|---|---|---|
| | ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಯಿಂದ ಬಂದರು ಮತ್ತು ಒಳನಾಡು ಜಲಸಾರಿಗೆ ಹೊರತುಪಡಿಸಿ ಲೋಕೋಪಯೋಗಿ | **ಲೋಕೋಪಯೋಗಿ ಸಚಿವರು** | **16, 23 ಮತ್ತು 30ನೇ ಜುಲೈ, 2013** |
| | ಕೃಷಿ ಮಾರುಕಟ್ಟೆ ಹೊರತುಪಡಿಸಿ **ಸಹಕಾರ ಇಲಾಖೆ** | **ಸಹಕಾರ ಸಚಿವರು** | |
| | **ಕೃಷಿ ಇಲಾಖೆ** | **ಕೃಷಿ ಸಚಿವರು** | |
| **III** ಬುಧವಾರ | **ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ** | **ಅರಣ್ಯ ಸಚಿವರು** | 17, 24 ಮತ್ತು 31ನೇ ಜುಲೈ 2013 |
| | ಕಂದಾಯ ಇಲಾಖೆಯಿಂದ ಮುಜರಾಯಿ ಹೊರತುಪಡಿಸಿ **ಕಂದಾಯ** | **ಕಂದಾಯ ಸಚಿವರು** | –"– |
| | 1. ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯಿಂದ **ಸಣ್ಣ ಕೈಗಾರಿಕೆಗಳು**<br>2. ಕಂದಾಯ ಇಲಾಖೆಯಿಂದ **ಮುಜರಾಯಿ**<br>3. ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯಿಂದ **ಸಕ್ಕರೆ** | **ಸಣ್ಣ ಕೈಗಾರಿಕೆಗಳು, ಮುಜರಾಯಿ ಮತ್ತು ಸಕ್ಕರೆ ಸಚಿವರು** | –"– |
| | ಜಲಸಂಪನ್ಮೂಲ ಇಲಾಖೆಯಿಂದ **ಭಾರಿ ಮತ್ತು ಮಧ್ಯಮ ನೀರಾವರಿ** | **ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು** | –"– |
| | 1. ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯಿಂದ **ಜವಳಿ**<br>2. ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಯಿಂದ ಲೋಕೋಪಯೋಗಿ ಹೊರತುಪಡಿಸಿ **ಬಂದರು ಮತ್ತು ಒಳನಾಡು ಜಲಸಾರಿಗೆ** | **ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು** | –"– |
| | ಜಲಸಂಪನ್ಮೂಲ ಇಲಾಖೆಯಿಂದ **ಸಣ್ಣ ನೀರಾವರಿ** | **ಸಣ್ಣ ನೀರಾವರಿ ಸಚಿವರು** | –"– |
| | 1. **ಯುವಜನ ಸೇವಾ ಇಲಾಖೆ**<br>2. ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆಯಿಂದ **ಮೀನುಗಾರಿಕೆ** | **ಯುವಜನ ಸೇವೆ ಮತ್ತು ಮೀನುಗಾರಿಕೆ ಸಚಿವರು** | –"– |
| | **ಕಾರ್ಮಿಕ ಇಲಾಖೆ** | **ಕಾರ್ಮಿಕ ಸಚಿವರು** | –"– |

| | | | |
|---|---|---|---|
| IV<br>ಗುರುವಾರ | 1. **ಸಂಪುಟ ವ್ಯವಹಾರಗಳ ಇಲಾಖೆ**<br>2. **ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ** ಇಲಾಖೆ<br>3. ಅಬಕಾರಿ ಹೊರತುಪಡಿಸಿ **ಸಣ್ಣ ಉಳಿತಾಯ, ಲಾಟರಿ ಮತ್ತು ಸಾಂಸ್ಥಿಕ ಹಣಕಾಸು ಒಳಗೊಂಡಂತೆ ಆರ್ಥಿಕ ಇಲಾಖೆ**<br>4. ಒಳಾಡಳಿತ ಇಲಾಖೆಯಿಂದ **ಗುಪ್ತದಳ**<br>5. ನಗರಾಭಿವೃದ್ಧಿ ಇಲಾಖೆಯಿಂದ **ಬೆಂಗಳೂರು ನಗರಕ್ಕೆ ಸಂಬಂಧಿಸಿದ ಎಲ್ಲಾ ವಿಷಯಗಳು**<br>6. ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯಿಂದ **ಗಣಿ ಮತ್ತು ಭೂವಿಜ್ಞಾನ**<br>7. ತೋಟಗಾರಿಕಾ ಇಲಾಖೆಯಿಂದ **ರೇಷ್ಮೆ**<br>8. **ಇಂಧನ** ಇಲಾಖೆ<br>9. ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯಿಂದ **ಭಾರಿ ಮತ್ತು ಮಧ್ಯಮ ಕೈಗಾರಿಕೆ**<br>10. ಹಂಚಿಕೆಯಾಗದ ಖಾತೆಗಳು | **ಮುಖ್ಯಮಂತ್ರಿಗಳು** | **18 ಹಾಗೂ 25ನೇ ಜುಲೈ, 2013** |
| | 1. **ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು**<br>2. **ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ**<br>3. ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆಯಿಂದ **ಪಶುಸಂಗೋಪನೆ.** | **ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಸಚಿವರು** | –"– |
| | ಒಳಾಡಳಿತ ಇಲಾಖೆಯಿಂದ ಗುಪ್ತದಳ ಹೊರತುಪಡಿಸಿ **ಒಳಾಡಳಿತ** | **ಗೃಹ ಸಚಿವರು** | –"– |
| | ನಗರಾಭಿವೃದ್ಧಿ ಇಲಾಖೆಯಿಂದ ಬಿ.ಬಿ.ಎಂ.ಪಿ., ಕೆ.ಯು.ಡಬ್ಲ್ಯೂ.ಎಸ್. ಅಂಡ್ ಡಿ.ಬಿ., ಕೆ.ಯು.ಐ.ಡಿ.ಎಫ್.ಸಿ. ಡೈರಕ್ಟರೇಟ್ ಆಫ್ ಟೌನ್ ಪ್ಲಾನಿಂಗ್, ಡೈರಕ್ಟರೇಟ್ ಆಫ್ ಲ್ಯಾಂಡ್ ಟ್ರಾನ್ಸ್‌ಪೋರ್ಟ್, ಬೆಂಗಳೂರು ನಗರಕ್ಕೆ ಸಂಬಂಧಿಸಿದ ವಿಷಯಗಳು, ನಗರಾಭಿವೃದ್ಧಿ ಪ್ರಾಧಿಕಾರಗಳು, ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಿ.ಎಂ.ಸಿ., ಟಿ.ಎಂ.ಸಿ. ಮತ್ತು ಟಿ.ಪಿ.ಎಸ್‌ಗಳನ್ನು ಹೊರತುಪಡಿಸಿ **ಮಹಾನಗರ ಪಾಲಿಕೆಗಳು** | **ನಗರಾಭಿವೃದ್ಧಿ ಸಚಿವರು** | –"– |

**ಸೂಚನೆ :** ಚುಕ್ಕೆ ಗುರುತಿನ ಪ್ರಶ್ನೆಗಳ ಪಟ್ಟಿಯಲ್ಲಿ ಸದಸ್ಯರ ಪ್ರಶ್ನೆಗಳ ಆದ್ಯತೆಯನ್ನು ನಿಗದಿಗೊಳಿಸಲು ವಿಧಾನಸೌಧದ ಮೊದಲನೆಯ ಮಹಡಿಯಲ್ಲಿರುವ ವಿಧಾನ ಪರಿಷತ್ತಿನ ಕಾರ್ಯದರ್ಶಿಯವರ ಕೊಠಡಿಯಲ್ಲಿ (ಕೊಠಡಿ ಸಂಖ್ಯೆ: **156 ಸಿ**) ಸಂಜೆ **4-00** ಗಂಟೆಗೆ ಬ್ಯಾಲೆಟ್ ನಡೆಸಲಾಗುವುದು. ಬ್ಯಾಲೆಟ್ ನಡೆಸುವ ಸಂದರ್ಭದಲ್ಲಿ ಹಾಜರಿರಲಿಚ್ಛಿಸುವ ಸದಸ್ಯರು ಹಾಜರಿರಬಹುದು.

## ಅಲ್ಪಕಾಲಾವಧಿಯ ಪ್ರಶ್ನೆಗಳು (ನಿಯಮ-56)

ಸಾರ್ವಜನಿಕ ಮಹತ್ವದ ವಿಷಯಕ್ಕೆ ಸಂಬಂಧಿಸಿದ ಪ್ರಶ್ನೆಗಳನ್ನು ಅವು ಜರೂರು ಸ್ವರೂಪ ಉಳ್ಳದ್ದಾಗಿದ್ದಲ್ಲಿ 10 ದಿನಗಳಗಿಂತ ಕಡಿಮೆ ಅವಧಿಯ ಸೂಚನಾ ಪತ್ರ ನೀಡುವುದರ ಮೂಲಕ ಕೇಳಬಹುದು. ಅಲ್ಪಕಾಲಾವಧಿ ಪ್ರಶ್ನೆಗಳ ಸೂಚನೆಯನ್ನು ನೀಡುವಲ್ಲಿ ಕಾರಣಗಳೇನೆಂಬುದನ್ನು ನಮೂದಿಸಬೇಕು. ಪ್ರಶ್ನೆಗಳ ಸೂಚನೆಯಲ್ಲಿ ಕಾರಣಗಳನ್ನು ಸೂಚಿಸದಿದ್ದಲ್ಲಿ ಪ್ರಶ್ನೆಗಳನ್ನು ಸದಸ್ಯರಿಗೆ ಹಿಂದಿರುಗಿಸಲಾಗುತ್ತದೆ.

## ಅರ್ಧ ಗಂಟೆ ಕಾಲದ ಚರ್ಚೆ (ನಿಯಮ– 58)

ವಿಧಾನ ಪರಿಷತ್ತಿನಲ್ಲಿ ಇತ್ತೀಚೆಗೆ ಕೇಳಿರುವ ಒಂದು ಪ್ರಶ್ನೆಯು ಸಾರ್ವಜನಿಕ ದೃಷ್ಟಿಯಿಂದ ಸಾಕಷ್ಟು ಪ್ರಾಮುಖ್ಯವಾಗಿದ್ದು, ಆ ಪ್ರಶ್ನೆಗೆ ವಿಧಾನ ಪರಿಷತ್ತಿನಲ್ಲಿ ಉತ್ತರ ನೀಡಿದ್ದಲ್ಲಿ ಅಥವಾ ಉತ್ತರವನ್ನು ಸಭೆಯ ಮುಂದೆ ಇಟ್ಟಿದ್ದಲ್ಲಿ ಅವುಗಳನ್ನು ಗಣನೆಗೆ ತೆಗೆದುಕೊಳ್ಳದೆ, ಆ ಪ್ರಶ್ನೆಗೆ ಕೊಟ್ಟಿರುವ ಉತ್ತರದಲ್ಲಿರತಕ್ಕ ಒಂದು ವಿಷಯವನ್ನು ವಿಶದಪಡಿಸುವುದು ಅಗತ್ಯವಿದ್ದು, ಆ ಪ್ರಶ್ನೆಯ ವಿಚಾರವನ್ನು ಸದಸ್ಯರು ಚರ್ಚೆಗೆ ತೆಗೆದುಕೊಳ್ಳಬಹುದು. ಸಭಾಪತಿಗಳು ವಾರದ ಎರಡು ದಿನಗಳಲ್ಲಿ ಅಂದರೆ ಮಂಗಳವಾರ ಮತ್ತು ಗುರುವಾರಗಳಂದು ಅರ್ಧಗಂಟೆ ಕಾಲದ ಚರ್ಚೆಗೆ ಅವಕಾಶ ಮಾಡಿಕೊಡುತ್ತಾರೆ ಅಥವಾ ಮೇಲೆ ತಿಳಿಸಿರುವ ದಿನಗಳ ಬದಲು ಸಭಾಪತಿಗಳು ಯಾವುದೇ ದಿನದಂದು ಚರ್ಚೆಗೆ ಅವಕಾಶ ಮಾಡಿಕೊಡಬಹುದು.

ಆ ಸದಸ್ಯರು ಯಾವ ದಿನ ಆ ವಿಷಯವನ್ನು ಚರ್ಚೆಗೆ ತರಬೇಕೆಂದು ಇಚ್ಛಿಸುತ್ತಾರೋ, ಆ ದಿನಕ್ಕೆ ಮೂರು ದಿವಸಗಳಿಗೆ ಮುಂಚಿತವಾಗಿ ಕಾರ್ಯದರ್ಶಿಯವರಿಗೆ ಲಿಖಿತ ಮೂಲಕ ಸೂಚನಾಪತ್ರವನ್ನು ಕೊಡಬೇಕು ಹಾಗೂ ತಾವು ಪ್ರಸ್ತಾಪಿಸಬೇಕೆಂದಿರುವ ಅಂಶ ಅಥವಾ ಅಂಶಗಳನ್ನು ಸಂಕ್ಷಿಪ್ತವಾಗಿ ನಮೂದಿಸಬೇಕು. ಸೂಚನಾಪತ್ರವು ಸಂಬಂಧಪಟ್ಟಿರುವ ವಿಷಯದ ಬಗ್ಗೆ ಚರ್ಚೆ ನಡೆಸಲು ಕಾರಣಗಳನ್ನು ಒಳಗೊಂಡ ಒಂದು ವಿವರಣಾತ್ಮಕ ಟಿಪ್ಪಣಿಯನ್ನು ನೀಡಬೇಕು.

ವಿಷಯವು ಚರ್ಚೆಗೆ ತೆಗೆದುಕೊಳ್ಳುವಷ್ಟು ಸಾರ್ವಜನಿಕ ಪ್ರಾಮುಖ್ಯತೆಯನ್ನು ಹೊಂದಿರುವುದೆ ಎಂಬುದನ್ನು ಸಭಾಪತಿಯವರು ನಿರ್ಧರಿಸುತ್ತಾರೆ. ಕಛೇರಿಗೆ ಸೂಚನಾ ಪತ್ರಗಳನ್ನು ಯಾವ ಅನುಕ್ರಮದಲ್ಲಿ ಸ್ವೀಕರಿಸಲಾಗುವುದೊ, ಅದೇ ಅನುಕ್ರಮದಲ್ಲಿ ತೆಗೆದುಕೊಳ್ಳಲಾಗುತ್ತದೆ. ಸದನದಲ್ಲಿ ಔಪಚಾರಿಕವಾದ ಪ್ರಸ್ತಾಪವಾಗಲಿ ಅಥವಾ ಮತ ಚಲಾವಣೆಯಾಗಲಿ ಇರುವುದಿಲ್ಲ. ಸೂಚನಾ ಪತ್ರವನ್ನು ಕೊಟ್ಟಿರುವಂತಹ ಸದಸ್ಯರು ಸಂಕ್ಷಿಪ್ತ ಹೇಳಿಕೆಯನ್ನು ಮಾಡಬಹುದು. ಸಂಬಂಧಪಟ್ಟ ಮಂತ್ರಿಯವರು ಸಂಕ್ಷಿಪ್ತವಾಗಿ ಉತ್ತರ ನೀಡತಕ್ಕದ್ದು. ವಾಸ್ತವ ವಿಷಯವನ್ನು ಮತ್ತಷ್ಟು ಸ್ಪಷ್ಟಗೊಳಿಸುವ ಉದ್ದೇಶದಿಂದ ಇತರೆ ಯಾವುದೇ ಸದಸ್ಯರು ಸಭಾಪತಿಯವರ ಅನುಮತಿಯೊಂದಿಗೆ ಪ್ರಶ್ನೆ ಕೇಳಬಹುದು.

## ಗಮನ ಸೆಳೆಯುವ ಸೂಚನೆ (ನಿಯಮ 72)

ಸದಸ್ಯರು ಸಭಾಪತಿಯವರ ಪೂರ್ವಭಾವಿ ಅನುಮತಿಯೊಂದಿಗೆ ಸಾರ್ವಜನಿಕ ಮಹತ್ವದ ಯಾವುದೇ ಜರೂರು ವಿಷಯದ ಬಗ್ಗೆ ಮಂತ್ರಿಗಳ ಗಮನಸೆಳೆಯಬಹುದು ಹಾಗೂ ಮಂತ್ರಿಗಳು ಸದನದಲ್ಲಿ ಆ ಬಗ್ಗೆ ಸಂಕ್ಷಿಪ್ತವಾದ ಹೇಳಿಕೆ ನೀಡಬಹುದು. ಅಂತಹ ಹೇಳಿಕೆಯ ಮೇಲೆ ಆ ಕಾಲಕ್ಕೆ ಚರ್ಚೆ ಇರುವುದಿಲ್ಲ. ಆದರೆ ಕಾರ್ಯಕಲಾಪಗಳ ಪಟ್ಟಿಯಲ್ಲಿ ತಿಳಿಸಿರುವಂತೆ ಐದು ಸದಸ್ಯರಿಗಿಂತ ಹೆಚ್ಚಿಲ್ಲದಂತೆ ವಿಷಯಕ್ಕೆ ಸಂಬಂಧಪಟ್ಟ ಪ್ರತಿಯೊಬ್ಬ ಸದಸ್ಯರು ಕಾರ್ಯಕಲಾಪಗಳ ಪಟ್ಟಿಯ ಮೇರೆಗೆ ಸಭಾಪತಿಯವರ ಅನುಮತಿಯೊಂದಿಗೆ ಸ್ಪಷ್ಟೀಕರಣ ಕೋರಬಹುದು. ಯಾವುದೇ ಸದಸ್ಯರು ಒಂದು ಉಪವೇಶನದಲ್ಲಿ ಒಂದೇ ವಿಷಯಕ್ಕೆ ಸಂಬಂಧಿಸಿದಂತೆ ಎರಡು ಬಾರಿ ಸೂಚನೆಗಳನ್ನು ನೀಡತಕ್ಕದ್ದಲ್ಲ.

ಸೂಚನಾ ಪತ್ರಗಳನ್ನು ನಿಗದಿಪಡಿಸಲಾದ ನಮೂನೆಯಲ್ಲಿ ಸದಸ್ಯರು ವಿದ್ಯುಕ್ತವಾಗಿ ಸಹಿ ಮಾಡಿ ವಿಧಾನ ಪರಿಷತ್ತಿನ ಪ್ರಶ್ನೆಗಳ ಶಾಖೆಗೆ ( ಕೊಠಡಿ ಸಂಖ್ಯೆ: **103** ) ಬೆಳಗ್ಗೆ **10-00** ಗಂಟೆಯೊಳಗೆ ನೀಡಬೇಕು. ಕಚೇರಿಯು ಮುಚ್ಚಿರುವ ಸಮಯದಲ್ಲಿ ಸೂಚನಾ ಪತ್ರವನ್ನು ಪ್ರಶ್ನೆಗಳ ಶಾಖೆಯ ( ಕೊಠಡಿ ಸಂಖ್ಯೆ: 103 ) ಹೊರಗಡೆ ಇಟ್ಟಿರುವ ಪೆಟ್ಟಿಗೆಯಲ್ಲಿ ಹಾಕಬಹುದಾಗಿದೆ. ಆ ದಿನದ ಬೆಳಗ್ಗೆ **10-00** ಗಂಟೆಯ ನಂತರ ಪಡೆಯಲಾಗುವ ಸೂಚನಾ ಪತ್ರಗಳನ್ನು ಸದನದ ಮರು ದಿನದ ಉಪವೇಶನಕ್ಕೆ ನೀಡಲಾಗಿದೆಯೆಂದು ಪರಿಗಣಿಸಲಾಗುವುದು. ಸ್ವೀಕೃತವಾದ ಹಾಗೂ ಮಂಡಿಸಿದ ಎಲ್ಲಾ ಸೂಚನಾ ಪತ್ರಗಳು ಒಂದು ವಾರದವರೆಗೆ ಮಾನ್ಯವಾಗಿರುತ್ತವೆ.

ಸಭಾಪತಿಯವರು ಆಯ್ಕೆ ಮಾಡದೆ ಉಳಿದಂತಹ ಸೂಚನೆಗಳು, ಅವುಗಳನ್ನು ಮಂಡಿಸಲಾದ ವಾರದ ಕೊನೆಯಲ್ಲಿ ಅವಾಗಿಯೇ ರದ್ದಾಗುತ್ತವೆ. ಈ ಬಗ್ಗೆ ಸದಸ್ಯರುಗಳಿಗೆ ಯಾವುದೇ ಮಾಹಿತಿ ನೀಡಲಾಗುವುದಿಲ್ಲ. ಆದಾಗ್ಯೂ ಸದಸ್ಯರು ಇಚ್ಛಿಸಿದಲ್ಲಿ ಅದೇ ವಿಷಯದ ಬಗ್ಗೆ ಹೊಸದಾಗಿ ಸೂಚನಾ ಪತ್ರವನ್ನು ನೀಡಬಹುದು.

## ನಿಯಮ 330ರ ಮೇರೆಗೆ ಸೂಚನೆ

ಒಂದು ಕ್ರಿಯಾಲೋಪವಲ್ಲದಂತಹ ಯಾವ ವಿಷಯವನ್ನಾಗಲಿ ಪರಿಷತ್ತಿನ ಗಮನಕ್ಕೆ ತರಬೇಕೆಂದು ಇಚ್ಛಿಸುವ ಸದಸ್ಯರು ನಿಗದಿಪಡಿಸಿದ ನಮೂನೆಯಲ್ಲಿ ವಿಷಯವನ್ನು ಕಾರಣಗಳ ಸಹಿತ ಸಂಕ್ಷಿಪ್ತವಾಗಿ ವಿವರಿಸಿ, ಲಿಖಿತ ಮೂಲಕವಾಗಿ ಕಾರ್ಯದರ್ಶಿಯವರಿಗೆ ಸೂಚನಾ ಪತ್ರವನ್ನು ಕೊಡಬೇಕು. ಸಭಾಪತಿಯವರು ಅನುಮತಿ ನೀಡಿದ ನಂತರವೇ ಸದಸ್ಯರು ವಿಷಯವನ್ನು ಪ್ರಸ್ತಾಪಿಸಲು ಅನುಮತಿ ದೊರೆತಂತಾಗುವುದು ಮತ್ತು ಆ ಸದಸ್ಯರು ಸಭಾಪತಿಯವರು ಗೊತ್ತುಪಡಿಸಬಹುದಾದ ಸಮಯ ಮತ್ತು ದಿನದಲ್ಲಿ ಮಾತ್ರ ಆ ವಿಷಯವನ್ನು ಪ್ರಸ್ತಾಪಿಸಬಹುದು.

## ನಿಯಮ 330ಎ ಮೇರೆಗೆ ಸೂಚನೆ

**೩೩೦ಎ. ವಿಶೇಷ ಪ್ರಸ್ತಾವಗಳು** :- ಪ್ರಶ್ನೋತ್ತರದ ವೇಳೆ ಇಲ್ಲದ ದಿನದಲ್ಲಿ ಕಾರ್ಯಕಲಾಪಗಳು ಪ್ರಾರಂಭವಾಗುವ ಮುಂಚೆ ಯಾರೇ ಸದಸ್ಯರು ಇತ್ತೀಚಿನ ವಿಷಯಗಳನ್ನೊಳಗೊಂಡ ಎರಡು ನೂರು ಪದಗಳಿಗೆ ಮೀರದಂತೆ ಸಭಾಪತಿಗಳ ಅನುಮತಿಯ ಮೇರೆಗೆ ವಿಶೇಷ ಪ್ರಸ್ತಾವವನ್ನು ಸದನದಲ್ಲಿ ಮಂಡಿಸಬಹುದು. ಸರ್ಕಾರವು ಆ ಪ್ರಸ್ತಾವಕ್ಕೆ ಮೂರು ದಿನಗಳ ಒಳಗೆ ಉತ್ತರವನ್ನು ಸದನಕ್ಕೆ ನೀಡತಕ್ಕದ್ದು.

ಒಂದು ದಿನಕ್ಕೆ ಮೂರಕ್ಕಿಂತ ಹೆಚ್ಚು ಇಲ್ಲದಂತೆ ಪ್ರಸ್ತಾವಗಳನ್ನು ಚರ್ಚಿಸಲು ಸಭಾಪತಿಯವರು ಅನುಮತಿಸತಕ್ಕದ್ದಲ್ಲ.

## ಖಾಸಗಿ ಸದಸ್ಯರುಗಳ ಕಾರ್ಯಕಲಾಪ ( ನಿಯಮ- 29 )

ಉಪವೇಶನದ ಪ್ರತಿ ಶುಕ್ರವಾರ ಕಡೆಯ ಎರಡೂವರೆ ಗಂಟೆಗಳನ್ನು ಖಾಸಗಿ ಸದಸ್ಯರುಗಳ ಕಾರ್ಯಕಲಾಪಗಳನ್ನು ವ್ಯವಹರಿಸಲು ಗೊತ್ತುಪಡಿಸಲಾಗಿರುತ್ತದೆ.

ಪ್ರಸಕ್ತ ಅಧಿವೇಶನದ ಕಾಲಾವಧಿಯಲ್ಲಿ ಸದಸ್ಯರುಗಳ ಖಾಸಗಿ ಕಾರ್ಯಕಲಾಪಗಳನ್ನು ವ್ಯವಹರಿಸಲು ಈ ಕೆಳಕಂಡ ದಿನಾಂಕದ ಕಡೆಯ ಎರಡೂವರೆ ಗಂಟೆಗಳನ್ನು ಗೊತ್ತುಪಡಿಸಲಾಗಿದೆ.

## ದಿನಾಂಕ: 19 ಮತ್ತು 26ನೇ ಜುಲೈ, 2013.

### ಖಾಸಗಿ ಸದಸ್ಯರ ನಿರ್ಣಯಗಳು

(ನಿಯಮ 143)

ಸದಸ್ಯರ ಖಾಸಗಿ ನಿರ್ಣಯಗಳಿಗೆ ಗೊತ್ತುಪಡಿಸಿದ ದಿನದಂದು ಸದಸ್ಯರೊಬ್ಬರು ಒಂದು ನಿರ್ಣಯವನ್ನು ಪ್ರಸ್ತಾಪ ಮಾಡಲು ಇಚ್ಛಿಸಿದಲ್ಲಿ ಅವರು ನಿರ್ಣಯಗಳಿಗೆ ಸಂಬಂಧಿಸಿದಂತೆ ಬ್ಯಾಲೆಟ್‌ಗೆ ಗೊತ್ತುಪಡಿಸಲಾದ ದಿನಾಂಕಕ್ಕಿಂತ 7 ಪೂರ್ಣ ದಿನಗಳ ಮುಂಚಿತವಾಗಿ ತಾವು ಸೂಚಿಸಲಿಚ್ಛಿಸುವ ನಿರ್ಣಯದ ಸಾರಾಂಶದೊಂದಿಗೆ ಸದರಿ ನಿರ್ಣಯ (ಖಾಸಗಿ ಕಾರ್ಯಕಲಾಪ)ದ ಸೂಚನಾ ಪತ್ರವನ್ನು ನೀಡಬಹುದು.

### ಬ್ಯಾಲೆಟ್ ನಡೆಸುವ ದಿನಾಂಕ ಕೆಳಕಂಡಂತಿದೆ

| ಖಾಸಗಿ ಕಾರ್ಯಕಲಾಪಕ್ಕೆ ಗೊತ್ತುಪಡಿಸಿದ ದಿನಾಂಕ | ಖಾಸಗಿ ನಿರ್ಣಯಗಳ ಸೂಚನಾ ಪತ್ರ ಸ್ವೀಕರಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕ | ನಿರ್ಣಯಗಳಿಗೆ ಆದ್ಯತೆಯನ್ನು ನಿರ್ಧರಿಸಲು ಬ್ಯಾಲೆಟ್ ನಡೆಸುವ ದಿನಾಂಕ |
|---|---|---|
| 19-07-2013 (ಶುಕ್ರವಾರ) | 08-07-2013 | 15-07-2013 |
| 26-07-2013 (ಶುಕ್ರವಾರ) | 15-07-2013 | 22-07-2013 |

### ಖಾಸಗಿ ಸದಸ್ಯರ ವಿಧೇಯಕಗಳು

(ನಿಯಮ 74)

ಒಂದು ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವ ಸಚಿವರಲ್ಲದ ಇತರೆ ಸದಸ್ಯರು ಸದರಿ ವಿಧೇಯಕದ ಉದ್ದೇಶ ಹಾಗೂ ಕಾರಣಗಳ ಹೇಳಿಕೆ ಹಾಗೂ ಅದಕ್ಕೆ ಸಂಬಂಧಿಸಿದ ಆರ್ಥಿಕ ಜ್ಞಾಪನಾ ಪತ್ರವೇನಾದರೂ ಇದ್ದಲ್ಲಿ, ಅದನ್ನು ಸೂಚನಾ ಪತ್ರದೊಂದಿಗೆ ಕೊಡಬೇಕು.

ಈ ನಿಯಮದ ಮೇರೆಗೆ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವ ಸೂಚನಾ ಪತ್ರವನ್ನು ಅಧಿವೇಶನ ಪ್ರಾರಂಭವಾಗುವುದಕ್ಕೆ ಏಳು ಪೂರ್ಣ ದಿನಗಳ ಮುಂಚೆ ನೀಡಬಹುದು.

## ಬ್ಯಾಲೆಟ್ ನಡೆಸುವ ದಿನಾಂಕ ಕೆಳಕಂಡಂತಿದೆ

| ಖಾಸಗಿ ಕಾರ್ಯಕಲಾಪಕ್ಕೆ ಗೊತ್ತುಪಡಿಸಿದ ದಿನಾಂಕ | ಖಾಸಗಿ ವಿಧೇಯಕ ಸೂಚನಾ ಪತ್ರ ಸ್ವೀಕರಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕ | ವಿಧೇಯಕಗಳಿಗೆ ಆದ್ಯತೆಯನ್ನು ನಿರ್ಧರಿಸಲು ಬ್ಯಾಲೆಟ್ ನಡೆಸುವ ದಿನಾಂಕ |
|---|---|---|
| 19-07-2013 (ಶುಕ್ರವಾರ) | 08-07-2013 | 15-07-2013 |
| 26-07-2013 (ಶುಕ್ರವಾರ) | 15-07-2013 | 22-07-2013 |

## ಪ್ರಶ್ನೆಗಳಿಗೆ ಸಂಬಂಧಿಸಿದಂತೆ ಉತ್ತರಗಳನ್ನು ಮುಂಚಿತವಾಗಿ ಪ್ರಕಟಿಸತಕ್ಕದ್ದಲ್ಲ.

ಪ್ರಶ್ನೆಗಳಿಗೆ ಸಂಬಂಧಿಸಿದಂತೆ ಉತ್ತರಗಳನ್ನು ಮುಂಚಿತವಾಗಿ ಪ್ರಕಟಿಸದೆ ಇರುವ ವಿಷಯದಲ್ಲಿ ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯ ವಿಧಾನ ಹಾಗೂ ನಡವಳಿಕೆಯ ನಿಯಮಗಳ 57ನೇ ನಿಯಮದ ಬಗ್ಗೆ ಸದಸ್ಯರ ಗಮನ ಸೆಳೆಯಲು ಈ ಕೆಳಗೆ ನಮೂದಿಸಲಾಗಿದೆ.

" ಪ್ರಶ್ನೆಗಳಿಗೆ ಉತ್ತರಗಳನ್ನು ಮುಂಚಿತವಾಗಿ ಪ್ರಕಟಿಸಕೂಡದು:- ಕೇಳಲಾದ ಪ್ರಶ್ನೆಗಳಿಗೆ ಸಚಿವರು ಪರಿಷತ್ತಿನಲ್ಲಿ ಕೊಡಲು ಉದ್ದೇಶಿಸಿರುವ ಉತ್ತರಗಳನ್ನು ಪರಿಷತ್ತಿನಲ್ಲಿ ವಾಸ್ತವವಾಗಿ ಕೊಟ್ಟ ಹೊರತು ಅಥವಾ ಮಂಡಿಸದ ಹೊರತು ಪ್ರಕಟಣೆಗಾಗಿ ಬಿಡುಗಡೆ ಮಾಡತಕ್ಕದ್ದಲ್ಲ ".

ಸದನದಲ್ಲಿ ಉತ್ತರಿಸಲಿರುವ ಪ್ರಶ್ನೆಗಳಿಗೆ ಸಂಬಂಧಿಸಿದಂತೆ, ಸದಸ್ಯರು ಉಪ ಪ್ರಶ್ನೆಗಳನ್ನು ಕೇಳಲು ಅನುಕೂಲವಾಗುವಂತೆ, ದಿನದ ಪಟ್ಟಿಯಲ್ಲಿ ಸೇರಿಸಿದ ಚುಕ್ಕೆ ಗುರುತಿನ ಹಾಗೂ ಅಲ್ಪಕಾಲಾವಧಿ ಪ್ರಶ್ನೆಗಳಿಗೆ ಉತ್ತರಗಳನ್ನು, ಪ್ರಶ್ನಾವಧಿ ಕಾಲವು ಪ್ರಾರಂಭವಾಗುವುದಕ್ಕೆ ಅರ್ಧ ಗಂಟೆ ಮುಂಚಿತವಾಗಿ ವಿಧಾನಸೌಧದ ಮೊದಲನೇ ಮಹಡಿಯಲ್ಲಿರುವ ಕೊಠಡಿ ಸಂಖ್ಯೆ: 103ರಲ್ಲಿ ಸದಸ್ಯರುಗಳ ಪರಾಮರ್ಶೆಗಾಗಿ ಇಡಲಾಗುವುದು. ದಿನದ ಪಟ್ಟಿಯಲ್ಲಿ ಸೇರಿಸಿದ ಪ್ರಶ್ನೆಗಳ ಪಟ್ಟಿಯನ್ನು ಅವುಗಳಿಗೆ ಉತ್ತರ ನೀಡಲಿರುವ ದಿನಕ್ಕಿಂತ ಒಂದು ದಿನ ಮುಂಚಿತವಾಗಿ ಸದಸ್ಯರಿಗೆ ಒದಗಿಸಲಾಗುವುದು.

ವಿ. ಶ್ರೀಶ್
ಕಾರ್ಯದರ್ಶಿ,
ಕರ್ನಾಟಕ ವಿಧಾನ ಪರಿಷತ್ತು

ವಿಧಾನ ಪರಿಷತ್ತಿನ ಎಲ್ಲಾ ಮಾನ್ಯ ಸದಸ್ಯರುಗಳಿಗೆ.